ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ರಾಷ್ಟ್ರೀಯ ಹೆದ್ದಾರಿ ಎನ್‌ಹೆಚ್-75ರಲ್ಲಿ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

45 (17) ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಷ್ಟ್ರೀಯ ಹೆದ್ದಾರಿ ಎನ್‌ಹೆಚ್-75ರ ಹಾಸನ-ಸಕಲೇಶಪುರ ರಸ್ತೆ ಅಭಿವೃದ್ಧಿಗಾಗಿ ಕಳೆದ 5 ವರ್ಷಗಳಲ್ಲಿ ಬಿಡುಗಡೆಯಾಗಿರುವ ಅನುದಾನವೆಷ್ಟು; ಈ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ; (ವರ್ಷವಾರು ಮಾಹಿತಿಯನ್ನು ನೀಡುವುದು)

(ಆ) ಈ ಕಾಮಗಾರಿಗಳನ್ನು ಪಡೆದಿರುವ ಗುತ್ತಿಗೆದಾರರು/ಏಜೆನ್ಸಿಗಳ ವಿವರ ನೀಡುವುದು ; ಈ ಕಾಮಗಾರಿಗಳು ಪ್ರಸ್ತುತ ಯಾವ ಯಾವ ಹಂತಗಳಲ್ಲಿವೆ; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಯೋಜನೆಯ ಕಾಮಗಾರಿಗಳು ಕಳಪೆ ಗುಣಮಟ್ಟ ಹೊಂದಿವೆಯೆಂದು ಸಾರ್ವಜನಿಕರಿಂದ ದೂರುಗಳು ಬಂದಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸದರಿ ಕಾಮಗಾರಿಗಳನ್ನು ನಿರ್ವಹಿಸಿರುವ ಗುತ್ತಿಗೆದಾರರು/ಏಜೆನ್ಸಿಗಳು ಮತ್ತು ಕಾಮಗಾರಿಗಳ ಮೇಲ್ವಿಚಾರಣೆ ವಹಿಸಿರುವ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ? (ಪ್ರಕರಣವಾರು ವಿವರ ನೀಡುವುದು)